# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **837**

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 16.12.2024

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಒಟ್ಟು ಎಷ್ಟು ಬಿಪಿಎಲ್ ಪಡಿತರ ಚೀಟಿಗಳನ್ನು ಇದುವರೆಗೆ ವಿತರಿಸಲಾಗಿದೆ ಹಾಗೂ ಬಿಪಿಎಲ್ ಪಡಿತರ ಚೀಟಿ ವಿತರಣೆಗೆ ಅನುಸರಿಸುತ್ತಿರುವ ನಿಯಮ ಹಾಗೂ ಮಾನದಂಡಗಳೇನು;</td><td>ರಾಜ್ಯದಲ್ಲಿ ಈ ಕೆಳಕಂಡಂತೆ ಪಡಿತರ ಚೀಟಿಗಳು ಚಾಲ್ತಿಯಲ್ಲಿರುತ್ತದೆ.
<table>
<tr><th>ವಿವರ</th><th>ಪಡಿತರ ಚೀಟಿಗಳು</th><th>ಫಲಾನುಭವಿಗಳು</th></tr>
<tr><td>ಅಂತ್ಯೋದಯ ಅನ್ನ ಪಡಿತರ ಚೀಟಿಗಳು</td><td>10,80,648</td><td>43,66,756</td></tr>
<tr><td>ಎನ್.ಎಫ್.ಎಸ್.ಎ. ಆದ್ಯತಾ ಪಡಿತರ ಚೀಟಿಗಳು</td><td>1,02,84,000</td><td>3,60,17,772</td></tr>
<tr><td>ರಾಜ್ಯ ಆದ್ಯತಾ ಪಡಿತರ ಚೀಟಿಗಳು</td><td>14,74,582</td><td>38,71,596</td></tr>
<tr><td>ಒಟ್ಟು ಆದ್ಯತಾ ಪಡಿತರ ಚೀಟಿಗಳು</td><td>1,28,39,230</td><td>4,42,56,124</td></tr>
</table>
ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br>
• ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ಮಂಡಳಿಗಳು/ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.</td></tr>
</table>

| | | |
|---|---|---|
| | | • ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟೇರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>• ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>• ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು. |
| ಆ | ಪ್ರಸ್ತುತ ದಿನದವರೆಗೆ ಒಟ್ಟು ಎಷ್ಟು ಬಿಪಿಎಲ್ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿದೆ; ಅದಕ್ಕೆ ಕಾರಣಗಳೇನು; ಸದರಿ ರದ್ದತಿಗೆ ಅನುಸರಿಸಿರುವ ಮಾನದಂಡಗಳೇನು; | 2023-24ನೇ ಸಾಲಿನಲ್ಲಿ ಒಟ್ಟು 74,342 ಹಾಗೂ 2024-25ನೇ ಸಾಲಿನಲ್ಲಿ 16719 ಆದ್ಯತಾ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿರುತ್ತದೆ.<br>ಸರ್ಕಾರವು ರೂಪಿಸಿರುವ ಮಾನದಂಡಗಳಿಗೆ ವಿರುದ್ಧವಾಗಿ ಪಡಿತರ ಚೀಟಿ ಪಡೆದವರ ಮಾಹಿತಿಯನ್ನು ಕುಟುಂಬ ತಂತ್ರಾಂಶದಿಂದ ಪಡೆದಿದ್ದು, ಆದಾಯ ತೆರಿಗೆ ಪಾವತಿದಾರರು, ವಾರ್ಷಿಕ ಆದಾಯ ರೂ.1.20 ಲಕ್ಷಕ್ಕಿಂತ ಹೆಚ್ಚಿರುವ ಫಲಾನುಭವಿಗಳು, ಸರ್ಕಾರಿ ನೌಕರರು, ಮೃತ ಫಲಾನುಭವಿಗಳು ಮತ್ತು 6 ತಿಂಗಳಿನಿಂದ ನಿರಂತರವಾಗಿ ಪಡಿತರವನ್ನು ಪಡೆಯದೇ ಇರುವ ಆದ್ಯತಾ ಪಡಿತರ ಚೀಟಿದಾರರ ಮಾಹಿತಿಯನ್ನು ಪಡೆದು ಕ್ರಮವಹಿಸಲಾಗುತ್ತದೆ.<br>ಜುಲೈ-2024ರ ನಂತರ ಯಾವುದೇ ಆದ್ಯತಾ ಪಡಿತರ ಚೀಟಿಗಳನ್ನು ರದ್ದುಪಡಿಸಿರುವುದಿಲ್ಲ, ಬದಲಾಗಿ ಸರ್ಕಾರವು ಆದ್ಯತಾ ಪಡಿತರ ಚೀಟಿ ಪಡೆಯಲು ನಿಗಧಿಪಡಿಸಿರುವ ಮಾನದಂಡಗಳ ವಿರುದ್ಧವಾಗಿ ಪಡೆದ ಆದ್ಯತಾ ಪಡಿತರ ಚೀಟಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲಾಗಿದೆ. |

| | | |
|---|---|---|
| ಇ | ಬಿಪಿಎಲ್ ಕಾರ್ಡ್ ನಿಂದ ಎಪಿಎಲ್ ಕಾರ್ಡ್‌ಗೆ ಪಡಿತರ ಕಾರ್ಡ್‌ಗಳನ್ನು ಪರಿವರ್ತಿಸಲಾಗಿದೆಯೇ; ಪರಿವರ್ತಿಸಿದ್ದಲ್ಲಿ ಅದಕ್ಕೆ ಕಾರಣಗಳೇನು; ಮತ್ತು ಅನುಸರಿಸಿರುವ ಮಾನದಂಡಗಳೇನು; | ಸರ್ಕಾರವು ಆದ್ಯತಾ (PHH) ಪಡಿತರ ಚೀಟಿ ಪಡೆಯಲು ನಿಗಧಿಪಡಿಸಿರುವ ಮಾನದಂಡಗಳನ್ವಯ ಯಾವುದೇ ಅರ್ಹ ಆದ್ಯತಾ (PHH) ಪಡಿತರ ಚೀಟಿದಾರರ ಪಡಿತರ ಚೀಟಿಯನ್ನು ರದ್ದುಪಡಿಸಿರುವುದಿಲ್ಲ. ಹಾಗೂ ಕುಟುಂಬ ತಂತ್ರಾಂಶದಿಂದ ಆದಾಯ ತೆರಿಗೆ ಪಾವತಿದಾರರು, ವಾರ್ಷಿಕ ಆದಾಯ ರೂ.1.20 ಲಕ್ಷಕ್ಕಿಂತ ಹೆಚ್ಚಿರುವ ಫಲಾನುಭವಿಗಳು, ಸರ್ಕಾರಿ ನೌಕರರು, ಮೃತ ಫಲಾನುಭವಿಗಳು, ಮತ್ತು 6 ತಿಂಗಳಿನಿಂದ ಪಡಿತರವನ್ನು ಪಡೆಯದೇ ಇರುವ ಆದ್ಯತಾ ಪಡಿತರ ಚೀಟಿದಾರರ ಮಾಹಿತಿಯನ್ನು ಪಡೆಯಲಾಗಿರುತ್ತದೆ. ಇದರಲ್ಲಿ ಮೃತ ಫಲಾನುಭವಿಗಳನ್ನು ತಂತ್ರಾಂಶದಿಂದ ರದ್ದುಪಡಿಸಲಾಗಿದ್ದು. ಉಳಿದ ಫಲಾನುಭವಿಗಳನ್ನು ಅಮಾನತ್ತು/ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮ ವಹಿಸಲಾಗಿತ್ತು. |
| ಈ | ಈ ರೀತಿ ಬಿಪಿಎಲ್ ಪಡಿತರ ಚೀಟಿಗಳನ್ನು ಏಕಾಏಕಿ ರದ್ದುಪಡಿಸಿರುವುದರಿಂದ ಮತ್ತು ಬಿಪಿಎಲ್ ಕಾರ್ಡ್ ನಿಂದ ಎಪಿಎಲ್ ಕಾರ್ಡ್‌ಗೆ ಪರಿವರ್ತಿಸಲಾಗಿರುವುದರಿಂದ, ಹಲವಾರು ಕಾರ್ಡ್ ದಾರರು ಅರ್ಹರಾಗಿದ್ದರೂ ಕೂಡ ಸರ್ಕಾರ ಹಲವಾರು ಯೋಜನೆಗಳು ಹಾಗೂ ಸೇವೆಗಳಿಂದ ವಂಚಿತರಾಗುತ್ತಿದ್ದು ಇದರಿಂದಾಗಿ ಸಾಕಷ್ಟು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ದಿನಾಂಕ:22.11.2024ರ ಪತ್ರದನ್ವಯ ಸರ್ಕಾರಿ ನೌಕರರು ಹಾಗೂ ಆದಾಯ ತೆರಿಗೆ ಪಾವತಿದಾರರನ್ನು ಹೊರತುಪಡಿಸಿ ಉಳಿದ ಎಲ್ಲಾ ಪಡಿತರ ಚೀಟಿಗಳನ್ನು ಆದ್ಯತಾ ಪಡಿತರ ಚೀಟಿಗಳಾನ್ನಾಗಿ ಮರು ಸ್ಥಾಪಿಸಲಾಗಿರುತ್ತದೆ. |
| ಉ | ಬಂದಿದ್ದಲ್ಲಿ, ಈ ಕಾರ್ಡ್‌ದಾರರಿಗೆ ಆಗುತ್ತಿರುವ ತೊಂದರೆಗಳನ್ನು ತಪ್ಪಿಸಲು ಸರ್ಕಾರ ಏನು ಕ್ರಮ ವಹಿಸಿದೆ? | |

**ಆನಾಸ 396 ಡಿಆರ್‌ಎ 2024**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು